



ಅರುಣ ಪಿ. ಭಟ್ಟ

## ವಾರಭವಿಷ್ಯ: 17.02.2022ರಿಂಧ 23.02.2022ರವರೆಗೆ




ಸಾಹಿತ್ಯ ಕ್ಷೇತ್ರದಲ್ಲಿ ಇರುವವರಿಗೆ ಉತ್ತಮ ಪ್ರಗತಿ. ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾದ ಪ್ರಗತಿ. ಆದಾಯ ಮೂಲದಿಂದ ಹೆಚ್ಚುವರಿಯಾಗಿ ಅನುಕೂಲ ಪಡೆಯಲಿದ್ದೀರಿ. ವೈಯಕ್ತಿಕ ಸಂಬಂಧಗಳು ಸುಮಧುರವಾಗಿ ಇರುತ್ತವೆ. ಇದರಿಂದ ನಿಮ್ಮ ಸಂತೋಷ ಹೆಚ್ಚಾಗಲಿದೆ. ನಿಮ್ಮ ನಿರ್ಧಾರಗಳನ್ನು ಸರಿಪಡಿಸಿಕೊಳ್ಳುವ ಬಗ್ಗೆ ಆಲೋಚನೆ ಮಾಡುತ್ತೀರಿ. ಶುಭದಿನ 19. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಕೌಟುಂಬಿಕ ವಿಚಾರಗಳಲ್ಲಿ ಉತ್ತಮ ಪ್ರಗತಿ ಕಾಣಲಿದ್ದೀರಿ. ಮಾರಾಟ ವಿಭಾಗದಲ್ಲಿದ್ದವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ, ಅಂತಿಮವಾಗಿ ಅತ್ಯುತ್ತಮವಾದದ್ದನ್ನು ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಸಂಬಂಧಿಕರು ನಿಮ್ಮ ಸಹಾಯ ಕೇಳಿಕೊಂಡು ಬರಲಿದ್ದಾರೆ. ಶುಭದಿನ 22. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.




ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸುವುದಕ್ಕೆ ಶ್ರಮ ಪಡುತ್ತೀರಿ. ಹಳೆಯ ಸ್ನೇಹಿತರು ಸಾಲ ಕೇಳಿದರು ಎಂದು ತಕ್ಷಣ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತು, ಹಣ, ಕಾಗದ ದಾಖಲೆ ಕಳೆದುಕೊಳ್ಳುವ ಅಪಾಯ ಇದೆ. ಪ್ರವಾಸ ಕೈಗೊಳ್ಳಲಿದ್ದೀರಿ. ಶುಭದಿನ 17. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಇಲ್ಲದಿದ್ದಲ್ಲಿ ದೊಡ್ಡ ಮಟ್ಟದಲ್ಲಿ ನಷ್ಟ ಅನುಭವಿಸಬೇಕಾಗುತ್ತದೆ. ಶುಭದಿನ 18. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂತಹ ಸನ್ನಿವೇಶ ಎದಿರಾಗುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಮನೆಯಲ್ಲಿ ಹಾಗೂ ಕುಟುಂಬದಲ್ಲಿ ಸಂತಸ ಇರುತ್ತದೆ. ಶುಭದಿನ 23. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ ಇದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಈ ವಾರ ನೀವು ಕೆಲವು ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 22. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಶುಭದಿನ 20. ಚಂಡಿ ಪಾರಾಯಣ ಮಾಡಿರಿ.




ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಹೊಸ ಕೆಲಸಕ್ಕೆ ಪ್ರಯತ್ನ ಮಾಡುತ್ತಿರುವವರು ಶ್ರಮವನ್ನು ಹೆಚ್ಚಿಸಬೇಕು. ಸಮಾಜದಲ್ಲಿ ಅತಿ ಮುಖ್ಯವಾದ ಹುದ್ದೆಗೆ ನಿಮ್ಮ ಹೆಸರನ್ನು ಸೂಚಿಸುವ ಸಾಧ್ಯತೆ ಇದೆ. ಶುಭದಿನ 21. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗದಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಸಿಗಲಿದೆ. ವ್ಯವಹಾರಗಳಿಗೆ ಸಂಬಂಧಿಸಿದಂತೆ ಉದ್ವೇಗ ಇದ್ದೇ ಇರುತ್ತದೆ. ಶುಭದಿನ 22. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ವಾರದ ಆರಂಭದಲ್ಲಿ ವೃತ್ತಿಪರರಿಗೆ ಪ್ರಮುಖ ಅವಕಾಶಗಳು ದೊರೆಯುತ್ತವೆ. ಉನ್ನತ ವಿದ್ಯಾಭ್ಯಾಸಕ್ಕಾಗಿ ಸ್ಥಳಾಂತರ ಆಗುವ ಸಾಧ್ಯತೆಗಳಿವೆ. ಸೋಂಕು, ಅಲರ್ಜಿ ಸಮಸ್ಯೆ ಇರುವವರು ಬಹಳ ಎಚ್ಚರಿಕೆಯಿಂದ ಇರಬೇಕು. ಜ್ವರ ಮತ್ತಿತರ ಆರೋಗ್ಯ ಬಾಧೆಗಳು ವಾರದ ಮಧ್ಯ ಭಾಗದ ತನಕ ಕಾಡಬಹುದು. ಮುಂಚಿನ ಉತ್ಸಾಹ ಕಡಿಮೆ ಆಗುತ್ತದೆ. ಶುಭದಿನ 20. ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.




ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚು ಮಾಡಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಮಕ್ಕಳಿಂದ ನಿಮಗೆ ಶುಭ ಸುದ್ದಿ ಇದೆ. ವಿವಿಧ ಮೂಲಗಳಿಂದ ಸಂಪತ್ತು ಸಂಗ್ರಹ ಆಗುತ್ತದೆ. ವೈಯಕ್ತಿಕ ಸಂಬಂಧವು ಸೌಹಾರ್ದಯುತವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಪ್ರೀತಿಪಾತ್ರರಿಗೆ ಮತ್ತಷ್ಟು ಹತ್ತಿರವಾಗುತ್ತೀರಿ. ಶುಭದಿನ 21. ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.




ಈ ವಾರ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಕಾನೂನು ವ್ಯಾಜ್ಯಗಳಲ್ಲಿ ಎದುರು ಪಕ್ಷದವರು ಸರಿಸಮವಾದ ಹೋರಾಟ ಮಾಡುತ್ತಾರೆ. ಶುಭದಿನ 19. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.